<u>1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಮನಗರ</u>

<u>Spl.C.113/2023</u>

ದಿಃ 19.04.2024
(ಸಾಕ್ಷಿಗೆ ಪ್ರಮಾಣವಚನವನ್ನು ಬೋಧಿಸಲಾಯಿತು)

Cw-6 Pw-6

| | | |
|---|---|---|
| ಹೆಸರು | ಃ | ರವಿ ಯು ಎಸ್ |
| ತಂದೆಯ ಹೆಸರು | ಃ | ಲೇ. ಶಿವಣ್ಣ |
| ವಯಸ್ಸು | ಃ | 46 ವರ್ಷ |
| ಉದ್ಯೋಗ | ಃ | ವ್ಯವಸಾಯ |
| ವಾಸಸ್ಥಳ | ಃ | ಉಜ್ಜನಹಳ್ಳಿ |

<u>ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ</u>

1. ನನಗೆ ಚಾಸಾ.1ರಿಂದ 5, ಮತ್ತು 7ರಿಂದ 13 ಗೊತ್ತು.

2. ಚಾಸಾ.1 ಹಿಂದೂ ಆದಿ ಕರ್ನಾಟಕ ಜಾತಿಗೆ ಸೇರಿದವಳಾಗಿರುತ್ತಾಳೆ.

3. ಈಗ ನ್ಯಾಯಾಲಯದ ಮುಂದೆ ಹಾಜರಿರುವ ಆರೋಪಿಗಳು ಒಕ್ಕಲಿಗ ಸಮುದಾಯಕ್ಕೆ ಸೇರಿದವರಾಗಿದ್ದು ನನಗೆ ಗೊತ್ತು.

4. ಆರೋಪಿತರಿಗೆ ಚಾಸಾ.1 ಇವಳ ಜಾತಿ ಗೊತ್ತು.

5. ಈ ಪ್ರಕರಣದಲ್ಲಿ ನನಗೇನೂ ಮಾಹಿತಿ ಇರುವುದಿಲ್ಲ.

6. ಪೊಲೀಸರು ನನ್ನನ್ನು ಯಾವ ಕಾಲಕ್ಕೂ ಯಾವುದೇ ರೀತಿಯಲ್ಲಿ ವಿಚಾರಣೆ ಮಾಡಿರುವುದಿಲ್ಲ ಮತ್ತು ನನ್ನಿಂದ ಯಾವುದೇ ಹೇಳಿಕೆಗಳನ್ನು ದಾಖಲಿಸಿಕೊಂಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅಭಿಯೋಜಕರು ಕೋರಿದ್ದಾರೆ. ಅದರಂತೆ ಸಾಕ್ಷಿಯನ್ನು ಪ್ರತಿಕೂಲ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅಭಿಯೋಜಕರಿಗೆ ಅನುಮತಿ ನೀಡಲಾಗಿದೆ)**

ಪಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದಃ

7. ಈಗ ನನಗೆ ಓದಿ ಹೇಳಿದ ನಿ.ಪಿ.6 ರಂತೆ, "ಉಜ್ಜನಹಳ್ಳಿ ಗ್ರಾಮದ ಸರ್ವೆ ನಂಬರ್ 56/2 ರಲ್ಲಿ 1 ಎಕರೆ 6 ಗುಂಟೆ ಜಾಗದಲ್ಲಿ ಕಾಲೋನಿಯವರು ಮನೆಗಳನ್ನು ಕಟ್ಟಿಕೊಂಡು ವಾಸ ಮಾಡುತ್ತಿದ್ದು,.................................

.........................................

.........................................

.........................................

ಮೇಲೆ ಕಾನೂನು ಕ್ರಮ ಕೈಗೊಳ್ಳಬೇಕೆಂದು ಕೋರುತ್ತೇನೆ, ಆರೋಪಿಗಳನ್ನು ನೋಡಿದ್ದು ಮುಂದಿನ ದಿನಗಳಲ್ಲಿ ನೋಡಿದರೆ ಗುರುತಿಸುತ್ತೇನೆ" ಎಂದು ದಿಃ18.05.2023 ರಂದು ಪೊಲೀಸರ ಮುಂದೆ ನಾನು ಹೇಳಿಕೆ ನೀಡಿರುತ್ತೇನೆಂದು ಸೂಚಿಸುವುದು ಸರಿಯಲ್ಲ.

8. ಈಗ ಆರೋಪಿತರು ಮತ್ತು ನಾವು ಒಂದೇ ಸಮುದಾಯಕ್ಕೆ ಸೇರಿದವರಾಗಿರುವುದರಿಂದ, ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎನ್ನುವುದು ಸರಿಯಲ್ಲ.

ಪಾಟೀ ಸವಾಲುಃ ಶ್ರೀ. ಎಸ್.ಎನ್.ಜಿ., ವಕೀಲರಿಂದ ಆರೋಪಿಗಳ ಪರವಾಗಿಃ ಏನೂ ಇಲ್ಲವೆಂದು ತಿಳಿಸಿರುತ್ತಾರೆ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ ಎಂದು ಸಾಕ್ಷಿ ಒಪ್ಪಿದ್ದಾರೆ

(ಜಿ ಡಿ ಮಹಾವರ್ಕರ್)
1ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು/
ವಿಶೇಷ ನ್ಯಾಯಾಧೀಶರು,
ರಾಮನಗರ.